# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ನಿರ್ದಿಷ್ಟ ವೃಂದದ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ 6ನೇ ರಾಜ್ಯ ವೇತನ ಆಯೋಗದ ವರದಿಯ ಎರಡನೇ ಸಂಪುಟದಲ್ಲಿನ ಶಿಫಾರಸ್ಸುಗಳು - ಅಧಿಕಾರಿ ಸಮಿತಿಯ ವರದಿಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**

1. ದಿನಾಂಕ: 01.06.2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017.
2. ದಿನಾಂಕ: 01.03.2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 6 ಎಸ್‌ಆರ್‌ಪಿ 2018.
3. ದಿನಾಂಕ: 29.05.2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 36 ಎಸ್‌ಆರ್‌ಪಿ 2018.
4. ದಿನಾಂಕ: 06.11.2019ರ ತಿದ್ದುಪಡಿ ಸಂಖ್ಯೆ: ಆಇ 36 ಎಸ್‌ಆರ್‌ಪಿ 2018.

**ಪ್ರಸ್ತಾವನೆ:**

6ನೇ ರಾಜ್ಯ ವೇತನ ಆಯೋಗದ ವರದಿಯ ಮೊದಲನೇ ಸಂಪುಟದಲ್ಲಿನ ಶಿಫಾರಸ್ಸುಗಳ ಬೆಳಕಿನಲ್ಲಿ ಮೇಲೆ (2)ರಲ್ಲಿ ಓದಲಾದ ದಿನಾಂಕ: 01.03.2018ರ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳು ಹಾಗೂ ಪಿಂಚಣಿಯನ್ನು ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯ ಎರಡನೇ ಸಂಪುಟದಲ್ಲಿ, ವಿವಿಧ ಇಲಾಖೆಗಳ ನಿರ್ದಿಷ್ಟ ವೃಂದದ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವಂತೆ ಮತ್ತು ನಿರ್ದಿಷ್ಟ ವೃಂದಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡುವಂತೆ ಶಿಫಾರಸ್ಸು ಮಾಡಿರುತ್ತದೆ. ರಾಜ್ಯದ ಹಿತಾಸಕ್ತಿ ಮತ್ತು ಆಡಳಿತಾತ್ಮಕ ಅತ್ಯಗತ್ಯತೆಯ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಕೆಲವೊಂದು ವೃಂದದ ಹುದ್ದೆಗಳ ವೇತನ ಶ್ರೇಣಿಗಳನ್ನು ಪರಿಷ್ಕರಿಸುವ ಬಗ್ಗೆ ಈಗಾಗಲೇ ಸರ್ಕಾರದಿಂದ ಸೂಕ್ತ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಇಲಾಖೆಗಳಲ್ಲಿನ ಹಲವಾರು ವೃಂದಗಳ ವೇತನ ಶ್ರೇಣಿಗಳನ್ನು ಪರಿಷ್ಕರಿಸುವುದರಿಂದ ಆಡಳಿತ ಯಂತ್ರದ ಮೇಲೆ ಉಂಟಾಗುವ ಪರಿಣಾಮಗಳನ್ನು ಗಮನದಲ್ಲಿರಿಸಿ, ಮೇಲೆ (3)ರಲ್ಲಿ ಓದಲಾದ ದಿನಾಂಕ: 29.05.2019ರ ಆದೇಶದಲ್ಲಿ, ವಿವಿಧ ಇಲಾಖೆಗಳ ನಿರ್ದಿಷ್ಟ ವೃಂದದ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಮತ್ತು ನಿರ್ದಿಷ್ಟ ವೃಂದದ ಹುದ್ದೆಗಳಿಗೆ ವಿಶೇಷ

ಭತ್ಯೆಯನ್ನು ಮಂಜೂರು ಮಾಡುವ ಕುರಿತಂತೆ 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಪರಿಶೀಲಿಸಲು ಅಧಿಕಾರಿ ಸಮಿತಿಯನ್ನು ರಚಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಅಧಿಕಾರಿ ಸಮಿತಿಯು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ಸಮಿತಿಯ ವರದಿಯನ್ನು ಸರ್ಕಾರವು ಪರಿಶೀಲಿಸಿರುತ್ತದೆ ಮತ್ತು ಈ ಕೆಳಕಂಡಂತೆ ಆದೇಶಗಳನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 36 ಎಸ್‌ಆರ್‌ಪಿ 2018(ಭಾ-1)**

**ಬೆಂಗಳೂರು, ದಿನಾಂಕ: 3ನೇ ಆಗಸ್ಟ್ 2022**

ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳು, 2018ರಡಿ ಪ್ರದತ್ತವಾದ ಅಧಿಕಾರದನ್ವಯ ಈ ಕೆಳಗಿನ ಇಲಾಖೆಗಳ ವೃಂದಗಳ ಎದುರು ನಮೂದಿಸಿರುವ ಹುದ್ದೆಗಳ 2018ರ ಪರಿಷ್ಕೃತ ವೇತನ ಶ್ರೇಣಿಗಳ ಪ್ರಸಕ್ತ ವೇತನ ಶ್ರೇಣಿಯನ್ನು ಮೇಲ್ದರ್ಜೆಗೇರಿಸಲು ರಾಜ್ಯ ಸರ್ಕಾರವು ಹರ್ಷಿಸುತ್ತದೆ:

| ಕ್ರ. ಸಂ. | ಇಲಾಖೆ | ವೃಂದ/ಹುದ್ದೆ | 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಪ್ರಸ್ತುತ ವೇತನ ಶ್ರೇಣಿ (ರೂ.) | ಮೇಲ್ದರ್ಜೆಗೇರಿಸಿದ 2018ರ ಪರಿಷ್ಕೃತ ವೇತನ ಶ್ರೇಣಿ (ರೂ.) |
|---|---|---|---|---|
| 1 | ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ | ಅಸಿಸ್ಟೆಂಟ್ ಕ್ಯುರೇಟರ್ ಮತ್ತು ಸರ್ವೇಯರ್ಸ್ | 33,450-62,600 | 43,100-83,900 |
| | | ಆರ್ಕಿಯಾಲಜಿಕ್ ಅಸಿಸ್ಟೆಂಟ್ ಶಾಸನ ತಜ್ಞರು/ಕ್ಯುರೇಟರ್ಸ್ | 37,900-70,850 | 45,300-88,300 |
| | | ಸಹಾಯಕ ನಿರ್ದೇಶಕರು (ಪ್ರಾಚ್ಯವಸ್ತು) | 40,900-78,200 | 52,650-97,100 |
| 2 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಆಶ್ರಮ ಶಾಲಾ ಶಿಕ್ಷಕರು | 23,500-47,650 | 25,800-51,400 |
| 3 | ಅಬಕಾರಿ | ಅಬಕಾರಿ ಉಪ ಅಧೀಕ್ಷಕರು | 40,900-78,200 | 43,100-83,900 |
| 4 | ಅರಣ್ಯ | ಅರಣ್ಯ ರಕ್ಷಕರು | 21,400-42,000 | 23,500-47,650 |
| | | ಉಪ ವಲಯ ಅರಣ್ಯಾಧಿಕಾರಿ | 23,500-47,650 | 30,350-58,250 |
| | | ಆನೆ ಕಾವಾಡಿಗರು | 17,000-28,950 | 18,600-32,600 |
| | | ಆನೆ ಮಾಹುತರು | 18,600-32,600 | 21,400-42,000 |

| ಕ್ರ. ಸಂ. | ಇಲಾಖೆ | ವೃಂದ/ಹುದ್ದೆ | 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಪ್ರಸ್ತುತ ವೇತನ ಶ್ರೇಣಿ (ರೂ.) | ಮೇಲ್ದರ್ಜೆಗೇರಿಸಿದ 2018ರ ಪರಿಷ್ಕೃತ ವೇತನ ಶ್ರೇಣಿ (ರೂ.) |
|---|---|---|---|---|
| | | ಆನೆ ಜಮೇದಾರ್ | 23,500-47,650 | 27,650-52,650 |
| 5 | ಪೊಲೀಸ್- ವಿಧಿವಿಜ್ಞಾನ ಪ್ರಯೋಗಾಲಯ | ಪ್ರಯೋಗಾಲಯ ಸಹಾಯಕರು | 21,400-42,000 | 23,500-47,650 |
| 6 | ಕಾರ್ಮಿಕ | ಕಾರ್ಮಿಕ ಅಧಿಕಾರಿ | 40,900-78,200 | 43,100-83,900 |
| 7 | ಕಾನೂನು ಮಾಪನ ಶಾಸ್ತ್ರ | ಸಹಾಯಕ ನಿಯಂತ್ರಕರು | 40,900-78,200 | 43,100-83,900 |
| 8 | ಮುದ್ರಣ, ಲೇಖನ ಸಾಮಗ್ರಿ & ಪ್ರಕಟಣೆಗಳು | ಸಹಾಯಕ ನಿರ್ದೇಶಕರು | 40,900-78,200 | 43,100-83,900 |
| 9 | ಸಮಾಜ ಕಲ್ಯಾಣ | ಆಶ್ರಮ ಶಾಲಾ ಶಿಕ್ಷಕರು | 23,500-47,650 | 25,800-51,400 |
| 10 | ಬುಡಕಟ್ಟು ಕಲ್ಯಾಣ | ಆಶ್ರಮ ಶಾಲಾ ಶಿಕ್ಷಕರು | 23,500-47,650 | 25,800-51,400 |
| 11 | ಭೂ ಮಾಪನ & ಭೂ ದಾಖಲೆಗಳು | ಸಹಾಯಕ ನಿರ್ದೇಶಕರು- ಭೂದಾಖಲೆಗಳು | 40,900-78,200 | 43,100-83,900 |

2. ಈ ಮೇಲೆ ನಮೂದಿಸಿರುವ ವೃಂದಗಳಲ್ಲಿ ಹುದ್ದೆಗಳನ್ನು ಧಾರಣೆ ಮಾಡಿರುವ ಸಿಬ್ಬಂದಿಗಳ ವೇತನವನ್ನು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 43ರ ಅವಕಾಶಗಳನ್ವಯ ನಿಗದಿಪಡಿಸತಕ್ಕದ್ದು.

3. ವೇತನ ಕ್ರಮಬದ್ಧಗೊಳಿಸುವ ಕುರಿತಂತೆ ಅನ್ವಯಿಸುವ ನಿಯಮಗಳು/ ಅಧಿಸೂಚನೆಗಳು/ಆದೇಶಗಳಲ್ಲಿ ತಿಳಿಸಿರುವ ಷರತ್ತು ಮತ್ತು ನಿಬಂಧನೆಗಳು ಮುಂದುವರೆದು ಅನ್ವಯಿಸುತ್ತವೆ.

4. ಈ ಆದೇಶವು 1ನೇ ಆಗಸ್ಟ್ 2022ರಿಂದ ಜಾರಿಗೆ ಬರುತ್ತದೆ.

5. ಈ ಮೇಲೆ ನಮೂದಿಸಿರುವ ಮೇಲ್ದರ್ಜೆಗೇರಿಸಲಾದ ವೇತನ ಶ್ರೇಣಿಗಳಲ್ಲಿ ವೇತನ ನಿಗದಿಪಡಿಸುವಲ್ಲಿ ಸಮಸ್ಯೆಗಳು ಉಂಟಾದಲ್ಲಿ ಅಂತಹ ಪ್ರಕರಣಗಳನ್ನು ಸರ್ಕಾರದ ಆದೇಶಕ್ಕೆ ಸಲ್ಲಿಸುವುದು.

6. 6ನೇ ರಾಜ್ಯ ವೇತನ ಆಯೋಗವು ಶಿಫಾರಸ್ಸು ಮಾಡಿದ ಇತರೆ ವೃಂದಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಹಾಗೂ ನಿರ್ದಿಷ್ಟ ವೃಂದದ ಹುದ್ದೆಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡುವ ಕುರಿತಾದ ಶಿಫಾರಸ್ಸನ್ನು ಸರ್ಕಾರವು ಒಪ್ಪಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Uma K
(ಉಮಾ.ಕೆ)

ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,(ಪಿ.ಬಿ. ನಂ.5398),ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,(ಪಿ.ಬಿ. ನಂ.5398),ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ,(ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಎಲ್ಲಾ ಪ್ರಾದೇಶಿಕ ಆಯುಕ್ತರು.
7. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
8. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
11. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
12. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
13. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
14. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
15. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ <u>www.finance.karnataka.gov.in</u> ವೀಕ್ಷಿಸಿ.**